# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2070(2446)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಸರ್ಕಾರದಿಂದ ಸಗಟು ಮಾರಾಟ ಏಜೆನ್ಸಿಗಳಿಗೆ ಬಾಕಿ ಇರುವ ಮೊತ್ತ ಕುರಿತು

(ಅ) ರಾಜ್ಯದಲ್ಲಿ ಫುಡ್ ಕಾರ್ಪೋರೇಷನ್ ಆಫ್ ಇಂಡಿಯಾ (ಎಫ್.ಸಿ.ಐ) ಕರ್ನಾಟಕ ಫುಡ್ ಕಾರ್ಪೋರೇಷನ್ (ಕೆ.ಎಫ್.ಸಿ)ಗೆ ಸಂಬಂಧಿಸಿದ ಗೋದಾಮುಗಳ ಸಂಖ್ಯೆ ಎಷ್ಟು; ಅವು ಯಾವುವು; ಅವುಗಳ ಸಂಗ್ರಹಣಾ ಸಾಮರ್ಥ್ಯವೆಷ್ಟು; ಗೋದಾಮುಗಳಿಲ್ಲದ ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಾವುವು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪಡಿತರ ಕೇಂದ್ರಗಳಿಗೆ ಪಡಿತರ ಸರಬರಾಜು ಮಾಡುವ ಸಗಟು ಮಾರಾಟ ಏಜೆನ್ಸಿಗಳ ಸಂಖ್ಯೆ ಎಷ್ಟು ಅವು ಯಾವುವು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) ಅವುಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ಉಡುಪಿ ಜಿಲ್ಲೆಯಲ್ಲಿ ಎಫ್.ಸಿ.ಐ, ಕೆ.ಎಫ್.ಸಿ ಗಳಿಂದ ಸಗಟು ಮಾರಾಟ ಏಜೆನ್ಸಿಗಳು ಯಾವ ಯಾವ ಪಡಿತರ ಸಾಮಗ್ರಿಗಳನ್ನು ಖರೀದಿ ಮಾಡುತ್ತಿವೆ; ಸರ್ಕಾರದಿಂದ ಈ ಏಜೆನ್ಸಿಗಳಿಗೆ ನೀಡಲು ಬಾಕಿಯಿರುವ ಮೊತ್ತವೆಷ್ಟು; (ವರ್ಷವಾರು, ಸಂಸ್ಥೆವಾರು ಮಾಹಿತಿ ನೀಡುವುದು)

(ಈ) ಸರ್ಕಾರವು ಭಾರೀ ಮೊತ್ತದ ಬಾಕಿ ಇರಿಸಿಕೊಂಡಿರುವ ಕಾರಣ ಸಗಟು ಏಜೆನ್ಸಿಗಳು ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?